# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 652 |
| ಸದಸ್ಯರ ಹೆಸರು | : | ಶ್ರೀ ಸಿ.ಟಿ ರವಿ (ವಿಧಾನ ಸಭೆಯಿಂದ ಚುನಾಯಿತರಾದವರು) ) |
| ಉತ್ತರಿಸುವವರು | : | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕ ಸಬಲೀಕರಣ ಸಚಿವರು. |
| ಉತ್ತರಿಸಬೇಕಾದ ದಿನಾಂಕ | : | 12.12.2025. |

******

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಬಾಲ ಗರ್ಭಿಣಿಯರ ಸಂಖ್ಯೆ ಹೆಚ್ಚಳಗೊಂಡಿರುವುದು ಸರ್ಕಾರದ ಗಮನದಲ್ಲಿದೆಯೇ; ರಾಜ್ಯದಲ್ಲಿರುವ ಒಟ್ಟು ಬಾಲ ಗರ್ಭಿಣಿಯರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು) | ಹೌದು, ರಾಜ್ಯದಲ್ಲಿಏಪ್ರಿಲ್ 2025 ರಿಂದ ಅಕ್ಟೋಬರ್ 2025 ರ ಮಾಹೆವರೆಗೆ ಆರೋಗ್ಯ ಮತ್ತು ಕುಟುಂಬ ಇಲಾಖೆಯ ಆರ್. ಸಿ.ಹೆಚ್ ಪೋರ್ಟಲ್ ನಲ್ಲಿ ದಾಖಲಾದ ಬಾಲಗರ್ಭಿಣಿಯರ ಸಂಖ್ಯೆ:2164 ಜಿಲ್ಲಾವಾರು ಮಾಹಿತಿಯನ್ನು **ಅನುಬಂಧದಲ್ಲಿ** ಲಗತ್ತಿಸಿದೆ. |
| ಆ) | ಬಾಲ ಗರ್ಭಿಣಿಯರ ಜೀವನ ಸುಧಾರಣೆ ಮತ್ತು ಅವರ ಮಕ್ಕಳ ಯೋಗಕ್ಷೇಮ ವಿಚಾರದಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಅವರಿಗೆ ನೀಡುತ್ತಿರುವ ಸೌಲಭ್ಯಗಳೇನು; | **ಬಾಲಗರ್ಭಿಣಿ ಪ್ರಕರಣಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳು ವಿವರ.**<br>• ಬಾಲ್ಯವಿವಾಹದ ಪ್ರಯತ್ನ, ನಿಶ್ಚಿತಾರ್ಥದ ಬಗ್ಗೆ ಕ್ರಮ ಕೈಗೊಳ್ಳಲು ಬಾಲ್ಯವಿವಾಹ ನಿಷೇಧ ಕಾಯ್ದೆ-2006 ರಲ್ಲಿ ಯಾವುದೇ ಕಲಂಗಳಲ್ಲಿ ಅವಕಾಶ ಇಲ್ಲದೇ ದೂರನ್ನು ದಾಖಲಿಸಲು ಸಾಧ್ಯವಾಗುತ್ತಿಲ್ಲವಾದ್ದರಿಂದ ಇದನ್ನು ಅಪರಾಧವನ್ನಾಗಿಸಲು ಬಾಲ್ಯವಿವಾಹ ನಿಷೇಧ (ಕರ್ನಾಟಕ ತಿದ್ದುಪಡಿ -2025) ಅನ್ನು ಜಾರಿಗೆತರಲು ಕ್ರಮವಹಿಸಲಾಗುತ್ತಿದೆ.<br>• ರಾಜ್ಯದಲ್ಲಿ ಅಪ್ರಾಪ್ತ ವಯಸ್ಸಿನ ಬಾಲಕಿಯರು ಬಾಲಗರ್ಭಿಣಿಯರು ಆಗುವುದನ್ನು ತಡೆಗಟ್ಟಲು ಎಲ್ಲಾ ಭಾಗೀದಾರ ಇಲಾಖೆಗಳ ಅಧಿಕಾರಿ/ ಸಿಬ್ಬಂದಿಗಳಿಗೆ ಎಲ್ಲಾ ಜಿಲ್ಲಾ ಮತ್ತು ತಾಲ್ಲೂಕು ಹಂತಗಳಲ್ಲಿ ಸಾಮರ್ಥ್ಯಾಭಿವೃದ್ಧಿ ತರಬೇತಿ ನೀಡಲು ಯೋಜಿಸಲಾಗುತ್ತಿದೆ.<br>• ಮಕ್ಕಳ ಸಹಾಯವಾಣಿ-1098 (24*7) ಕಾರ್ಯನಿರ್ವಹಿಸುತ್ತಿದೆ. ಸಂಕಷ್ಟದಲ್ಲಿರುವ ಮಗುವಿನ ಬಗ್ಗೆ ಯಾವುದೇ ಸಮಯದಲ್ಲಿ ಕರೆ ಸ್ವೀಕೃತವಾದರೂ ತಕ್ಷಣ ಮಗುವನ್ನು ರಕ್ಷಿಸಲು ಸಂಬಂಧಿಸಿದ ಅಧಿಕಾರಿಗಳು ಕಾರ್ಯ ಪ್ರವೃತ್ತರಾಗಿರುತ್ತಾರೆ.<br>• ದಿನಾಂಕ: 06.09.2024 ರ ಸರ್ಕಾರದ ಆದೇಶದಂತೆ ಅಪ್ರಾಪ್ತ ವಯಸ್ಸಿನ ಹೆಣ್ಣು ಮಕ್ಕಳು ಬಾಲಗರ್ಭಿಣಿಯರಾಗುವುದನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು ವಿವಿಧ ಇಲಾಖೆಗಳಿಗೆ ಜವಾಬ್ದಾರಿಗಳನ್ನು ನಿಗದಿಪಡಿಸಲಾಗಿದೆ.<br>• ಗ್ರಾಮ ಪಂಚಾಯತಿ ಮಟ್ಟದಲ್ಲಿ ಮಹಿಳೆಯರು ಮತ್ತು ಮಕ್ಕಳ ಸುರಕ್ಷತೆಗಾಗಿ ಮಹಿಳೆಯರ ಮತ್ತು ಮಕ್ಕಳ ಹಕ್ಕುಗಳ ಕಾವಲು ಸಮಿತಿಯನ್ನು ರಚಿಸಲಾಗಿದೆ. |

| | | |
|---|---|---|
| | | • ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಸಮಿತಿ ರಚಿಸಲಾಗಿದ್ದು, ಈ ಪ್ರಕರಣಗಳ ಕುರಿತು ಪ್ರತಿ ತ್ರೈಮಾಸಿಕದಲ್ಲಿ ಪರಿಶೀಲನೆ ಮಾಡಲಾಗುತ್ತಿದೆ.<br>• ಆಕಾಶವಾಣಿಯಲ್ಲಿ ಸರಣಿ ಕಾರ್ಯಕ್ರಮಗಳ ಮೂಲಕ ಜಾಗೃತಿ ಮೂಡಿಸಲಾಗಿದೆ.<br>• ರಾಜ್ಯಾದ್ಯಂತ ಜಿಲ್ಲಾಧಿಕಾರಿಗಳ ಮಾರ್ಗದರ್ಶನದಲ್ಲಿ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಶಾಲೆಗಳು, ವಿವಿಧ ಇಲಾಖೆಗಳು ಮತ್ತು ಸಾರ್ವಜನಿಕರಿಗೆ ಹೆಚ್ಚಿನ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು, ಲಕ್ಷಾಂತರ ಭಾಗೀದಾರರು, ಶಾಲಾ ಮಕ್ಕಳನ್ನೊಳಗೊಂಡಂತೆ ಸಾರ್ವಜನಿಕರು ಪ್ರಯೋಜನ ಪಡೆದಿರುತ್ತಾರೆ.<br>• ಪಾಲನೆ/ ಪೋಷಣೆ ಅವಶ್ಯಕತೆ ಇರುವ ಮಕ್ಕಳ ಸುರಕ್ಷತೆ ಮತ್ತು ಪುನರ್ವಸತಿಗಾಗಿ ಪ್ರತಿ ಜಿಲ್ಲೆಯಲ್ಲೂ ಮಕ್ಕಳ ಕಲ್ಯಾಣ ಸಮಿತಿ, ಮಕ್ಕಳ ವಿಶೇಷ ಪೊಲೀಸ್ ಘಟಕ, ಮಕ್ಕಳ ಪಾಲನಾ ಸಂಸ್ಥೆ ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳು ಕಾರ್ಯ ನಿರ್ವಹಿಸುತ್ತಿವೆ.<br>• ಸಂತ್ರಸ್ಥ ಮಗುವಿಗೆ ಕಾನೂನು ಸಲಹೆ ಮತ್ತು ಆಪ್ತ ಸಮಾಲೋಚನೆಗಾಗಿ ಪ್ರತಿ ಜಿಲ್ಲೆಯಲ್ಲೂ ಬೆಂಬಲ ವ್ಯಕ್ತಿಗಳನ್ನು ಆಯ್ಕೆಮಾಡಿ ತರಬೇತಿ ನೀಡಲಾಗಿದೆ. (ಪ್ರಸ್ತುತ 173 ಬೆಂಬಲ ವ್ಯಕ್ತಿಗಳು ಕಾರ್ಯ ನಿರ್ವಹಿಸುತ್ತಿರುತ್ತಾರೆ).<br>• ರಾಷ್ಟ್ರೀಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ (NCPCR) ವತಿಯಿಂದ ಕ್ರಮಬದ್ಧ ಕಾರ್ಯ ವಿಧಾನ(SOP) ರಚನೆಯಾಗಿದ್ದು, ಭಾಗೀದಾರ ಇಲಾಖೆಗಳಿಗೆ ಸದರಿ ಕಾರ್ಯ ವಿಧಾನದಂತೆ ಕಾರ್ಯ ನಿರ್ವಹಿಸಲು ಈಗಾಗಲೇ ತಿಳಿಸಲಾಗಿದೆ.<br>• ಮಕ್ಕಳ ಪಾಲನಾ ಕೇಂದ್ರಗಳಲ್ಲಿ ಸಂತ್ರಸ್ಥೆಗೆ 18 ವರ್ಷ ವಯಸ್ಸು ಪೂರ್ತಿಗೊಳ್ಳುವವರೆಗೆ ವಾಸ್ಯವ್ಯಕ್ಕೆ ಅವಕಾಶ ಮಾಡಿಕೊಡಲಾಗುವುದು ಹಾಗೂ 23 ವರ್ಷದವರೆಗೂ ಅವಶ್ಯಕ ಬೆಂಬಲ ನೀಡಲಾಗುವುದು.<br>• ಸಂತ್ರಸ್ಥೆಗೆ ಆರೋಗ್ಯ ಸೇವೆ ಮತ್ತು ವೈದ್ಯಕೀಯ ತಪಾಸಣೆಗೆ ಒಂದು ಬಾರಿಗೆ ರೂ.6000/-ಹಾಗೂ ಶಿಕ್ಷಣ ಮುಂದುವರೆಸಲು ಇಚ್ಛಿಸಿದಲ್ಲಿ ಪ್ರಾಯೋಜಕತ್ವ ಯೋಜನೆಯಡಿ ಪ್ರತಿ ತಿಂಗಳಿಗೆ ರೂ.4,000/-ಗಳಂತೆ 18 ವರ್ಷ ಪೂರ್ಣಗೊಳ್ಳುವವರೆಗೂ ಆರ್ಥಿಕ ಸೌಲಭ್ಯ ಒದಗಿಸಲಾಗುವುದು.<br>• Pradhan Mantri Jan ArogyaYojana (PM-JAY) ಅಡಿಯಲ್ಲಿ ವರ್ಷಕ್ಕೆ ರೂ.5.00 ಲಕ್ಷಗಳ ಆರೋಗ್ಯವಿಮೆಯನ್ನು ಸಂತ್ರಸ್ಥೆಗೆ ಮತ್ತು ಅವಳ ನವಜಾತ ಶಿಶುವಿಗೆ ನೀಡಲಾಗುವುದು.<br>• ಬಾಲ್ಯವಿವಾಹ ಪ್ರಕರಣಗಳನ್ನು . ತಡೆಯುವನಿಟ್ಟಿನಲ್ಲಿ ಜಿಲ್ಲಾಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಹಾಗೂ ತಾಲ್ಲೂಕು ಮಟ್ಟದಲ್ಲಿ ಆಯಾ ತಾಲ್ಲೂಕು ತಹಶೀಲ್ದಾರ್‌ರನ್ನು ಸಮನ್ವಯ ಹಾಗೂ ಪರಿಶೀಲನಾ ಸಮಿತಿ ಅಧ್ಯಕ್ಷರನ್ನಾಗಿ ಸರ್ಕಾರವು ನೇಮಿಸಿದೆ.<br>• ಬಾಲಗರ್ಭಿಣಿ ಪ್ರಕರಣಗಳು ಕಂಡುಬಂದಲ್ಲಿ ನಿಯಮಾನುಸಾರ FIR ದಾಖಲಿಸಿ ಕ್ರಮವಹಿಸಲಾಗುತ್ತಿದೆ.. |

| | | |
|---|---|---|
| | | **<u>ಸದರಿ ಪ್ರಕರಣಗಳನ್ನು ನಿಯಂತ್ರಿಸಲು ಈ ಕೆಳಕಂಡಂತೆ ಕಾಯ್ದೆ ಮತ್ತು ನಿಯಮಗಳನ್ನು ರೂಪಿಸಲಾಗಿದೆ.</u>**<br>○ ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ-2015<br>○ ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ತಿದ್ದುಪಡಿ ಕಾಯ್ದೆ 2021, 2016ರ ಮಾದರಿ ನಿಯಮಗಳು.<br>○ ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ತಡೆ (ಪೋಕ್ಸೋ) ಕಾಯ್ದೆ-2012 ನಿಯಮಗಳು-2020<br>○ ಬಾಲ್ಯವಿವಾಹ ನಿಷೇಧ ಕಾಯ್ದೆ-2006.<br>○ ಬಾಲ್ಯವಿವಾಹ ನಿಷೇಧ (ಕರ್ನಾಟಕ) ನಿಯಮಗಳು- 2014.<br>○ ಬಾಲ್ಯವಿವಾಹ ನಿಷೇಧ (ಕರ್ನಾಟಕ ತಿದ್ದುಪಡಿ) ಕಾಯ್ದೆ-2016<br>○ ಬಾಲ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ-1986<br>○ ಮಹಿಳೆಯರು ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ (ತಡೆಗಟ್ಟುವಿಕೆ) ಕಾಯ್ದೆ-1956 |
| ಇ) | ಬಾಲ ಗರ್ಭಿಣಿಯರ ಪ್ರಮಾಣ ಹೆಚ್ಚಳಕ್ಕೆ ಕಾರಣಗಳೇನು; ಈ ಪ್ರಮಾಣವನ್ನು ಕಡಿಮೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಹಾಕಿಕೊಂಡಿರುವ ಕಾರ್ಯಕ್ರಮಗಳೇನು; | • ಬಾಲಗರ್ಭಿಣಿ ಪ್ರಕರಣಗಳು ಹೆಚ್ಚಾಗಲು ಕಾರಣಗಳು:<br>• ತ್ವರಿತಗತಿಯಲ್ಲಿ ಬದಲಾಗುತ್ತಿರುವ ಕೌಟುಂಬಿಕ ವ್ಯವಸ್ಥೆ ಮತ್ತು ಕೌಟುಂಬಿಕ ಸಮಸ್ಯೆ<br>• ಅಪ್ರಾಪ್ತ ವಯಸ್ಸಿನ ಮಕ್ಕಳಿಂದ ಸಾಮಾಜಿಕ ಜಾಲತಾಣದ ಅತಿಯಾದ ಬಳಕೆ<br>• ಪೋಕ್ಸೋ ಹಾಗೂ ಬಾಲ್ಯವಿವಾಹಗಳು ಹೆಚ್ಚಾಗಿ ಸಂಭವಿಸುತ್ತಿದ್ದು ಬಾಲಗರ್ಭಿಣಿಯರ ಸಂಖ್ಯೆ ಹೆಚ್ಚಾಗಲು ಕಾರಣವಾಗಿದೆ.<br>• ಹದಿಹರೆಯದ ಮಕ್ಕಳಲ್ಲಿ ಹೆಚ್ಚುತ್ತಿರುವ ಪ್ರೇಮ ಪ್ರಕರಣಗಳು.<br>• ಕೆಲವು ಸಮುದಾಯ ಮತ್ತು ಪಂಗಡಗಳಲ್ಲಿ ಆಚರಣೆಯಲ್ಲಿರುವ ಸಾಮಾಜಿಕ ಪದ್ಧತಿಗಳಿಂದಾಗಿ ಬಾಲ್ಯವಿವಾಹಗಳು ನಡೆಯುತ್ತಿದ್ದು, ಇದರಿಂದಾಗಿ ಬಾಲಗರ್ಭಿಣಿಯರ ಸಂಖ್ಯೆ ಹೆಚ್ಚಾಗುತ್ತಿದೆ.<br>• ಬಾಲ್ಯವಿವಾಹಗಳ ಸಂಖ್ಯೆ ಹೆಚ್ಚಾಗುತ್ತಿರುವುದರಿಂದ ಬಾಲಗರ್ಭಿಣಿಯರ ಸಂಖ್ಯೆ ಹೆಚ್ಚುತ್ತಿದೆ.<br>• ಹೆಣ್ಣು ಮಕ್ಕಳ ಮೇಲೆ ಅತ್ಯಾಚಾರ/ ಲೈಂಗಿಕ ಶೋಷಣೆ ನಿಯಂತ್ರಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳು ಹಾಗೂ ತಾಲ್ಲೂಕು/ ಜಿಲ್ಲಾಮಟ್ಟಗಳಲ್ಲಿ ಸದರಿ ಶೋಷಣೆಗಳನ್ನು ನಿಯಂತ್ರಿಸಲು ಕೈಗೊಂಡಿರುವ ಕ್ರಮಗಳ ವಿವರ:<br><br>• ಮಕ್ಕಳ ಸಹಾಯವಾಣಿ-1098 24*7 ಮಕ್ಕಳ ಸುರಕ್ಷತೆಗಾಗಿ ಕಾರ್ಯನಿರ್ವಹಿಸುತ್ತಿದೆ. ಸಂಕಷ್ಟದಲ್ಲಿರುವ ಮಗುವಿನ ಬಗ್ಗೆ ಯಾವುದೇ ಸಮಯದಲ್ಲಿ ಕರೆ ಸ್ವೀಕೃತವಾದರೂ ತಕ್ಷಣ ಮಗುವನ್ನು ರಕ್ಷಿಸಲು ಸಂಬಂಧಿಸಿದ ಅಧಿಕಾರಿಗಳು ಕಾರ್ಯ ಪ್ರವೃತ್ತರಾಗುತ್ತಾರೆ.<br>• ಮಕ್ಕಳ ರಕ್ಷಣಾ ಕಾರ್ಯಕ್ರಮಗಳ ಕುರಿತು ಮಾನ್ಯ ಇಲಾಖಾ ಸಚಿವರ ಸಂದೇಶವನ್ನು ಆಕಾಶವಾಣಿ ಮೂಲಕ ದಿನಾಂಕ:16.09.2024 ರಿಂದ 15.10.2024ರ ವರೆಗೆ ಪ್ರಸಾರ ಮಾಡಲಾಗಿದೆ. |

| | | |
|---|---|---|
| | | • ದಿನಾಂಕ:11.08.2024 ರಿಂದ "ವಾತ್ಸಲ್ಯವಾಣಿ" ಎಂಬ 13 ವಾರಗಳ ಸರಣಿ ಕಾರ್ಯಕ್ರಮವನ್ನು ಆಕಾಶವಾಣಿ ಮೂಲಕ ಪ್ರಸಾರ ಮಾಡಲಾಗುತ್ತಿದ್ದು, ಈ ಕಾರ್ಯಕ್ರಮದಲ್ಲಿ ಮಾನ್ಯ ಇಲಾಖಾ ಸಚಿವರು, ಇಲಾಖಾ ಕಾರ್ಯದರ್ಶಿಗಳು, ನಿರ್ದೇಶಕರು ಸೇರಿದಂತೆ ಹಲವು ಅಧಿಕಾರಿಗಳು ಭಾಗವಹಿಸಿ ಜಾಗೃತಿ ಮೂಡಿಸಿದ್ದಾರೆ.<br>• ರಾಜ್ಯಾದ್ಯಂತ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಶಾಲೆಗಳು, ವಿವಿಧ ಇಲಾಖೆಗಳು ಮತ್ತು ಸಾರ್ವಜನಿಕರಿಗೆ ಒಟ್ಟು 697 ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು ಸುಮಾರು 575349 ಭಾಗೀದಾರರು ಸಾರ್ವಜನಿಕರು ಒಳಗೊಂಡಂತೆ ಪ್ರಯೋಜನ ಪಡೆದಿರುತ್ತಾರೆ.<br>• ಪ್ರತಿ ಜಿಲ್ಲೆಯಲ್ಲೂ ಮಕ್ಕಳ ಕಲ್ಯಾಣ ಸಮಿತಿ, ಬಾಲನ್ಯಾಯ ಮಂಡಳಿ, ಮಕ್ಕಳ ವಿಶೇಷ ಪೊಲೀಸ್ ಘಟಕ, ಮಕ್ಕಳ ಪಾಲನಾ ಸಂಸ್ಥೆ ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳು ಪಾಲನೆ/ ಪೋಷಣೆ ಅವಶ್ಯಕತೆ ಇರುವ ಮಕ್ಕಳು ಮತ್ತು ಕಾನೂನು ಸಂಘರ್ಷಕ್ಕೊಳಗಾದ ಮಕ್ಕಳ ಪುನರ್ವಸತಿಗೋಸ್ಕರ ಕಾರ್ಯನಿರ್ವಹಿಸುತ್ತಿವೆ.<br>• ಗ್ರಾಮ ಪಂಚಾಯತಿ ಮಟ್ಟದಲ್ಲಿ ಮಹಿಳೆಯರು ಮತ್ತು ಮಕ್ಕಳ ಸುರಕ್ಷತೆಗಾಗಿ ಮಹಿಳೆಯರ ಮತ್ತು ಮಕ್ಕಳ ಹಕ್ಕುಗಳ ಕಾವಲುಸಮಿತಿಯನ್ನು ರಚಿಸಲಾಗಿದೆ.<br>• ಬಾಲಗರ್ಭಿಣಿಯರ ಪ್ರಕರಣಗಳಿಗೆ ಸಂಬಂಧಿಸಿದಂತೆ, ದಿನಾಂಕ:06.09.2024ರ ಸರ್ಕಾರದ ಆದೇಶದಂತೆ ಅಪ್ರಾಪ್ತ ವಯಸ್ಸಿನ ಹೆಣ್ಣು ಮಕ್ಕಳು ಬಾಲಗರ್ಭಿಣಿಯರಾಗುವುದನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು ವಿವಿಧ ಇಲಾಖೆಗಳಿಗೆ ಜವಾಬ್ದಾರಿಗಳನ್ನು ನಿಗದಿಪಡಿಸಲಾಗಿದೆ.<br>• ಬಾಲಗರ್ಭಿಣಿಯರ ಪ್ರಕರಣಗಳನ್ನು ತಡೆಗಟ್ಟುವ ಸಂಬಂಧ ಪ್ರಸ್ತುತ ವರ್ಷ ಅಧಿಕಾರಿ/ ಸಿಬ್ಬಂದಿಗಳ ಸಾಮರ್ಥ್ಯಾಭಿವೃದ್ಧಿ ತರಬೇತಿ ಆಯೋಜಿಸಲು ಕ್ರಮವಹಿಸಲಾಗುತ್ತಿದೆ.<br>• ಲೈಂಗಿಕ ದೌರ್ಜನ್ಯಕ್ಕೊಳಗಾದ ಸಂತ್ರಸ್ಥ ಮಗುವಿಗೆ ಕಾನೂನು ಸಲಹೆ ಮತ್ತು ಆಪ್ತ ಸಮಾಲೋಚನೆಗಾಗಿ ಪ್ರತಿಯೊಂದು ಜಿಲ್ಲೆಯಲ್ಲೂ ಬೆಂಬಲ ವ್ಯಕ್ತಿಗಳನ್ನು ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ಆಯ್ಕೆಮಾಡಿ ಸಂತ್ರಸ್ಥರ ಬೇಡಿಕೆಗಳಿಗೆ ಸ್ಪಂದಿಸಲು ತರಬೇತಿ ನೀಡಲಾಗಿದೆ.<br>• ರಾಜ್ಯದ ಎಲ್ಲಾ ಶಾಲಾ-ಕಾಲೇಜು ವಸತಿನಿಲಯ ಹಾಗೂ ತರಬೇತಿ ಸಂಸ್ಥೆಗಳಲ್ಲಿ ಮಕ್ಕಳ ಹಕ್ಕುಗಳು ಬಾಲಗರ್ಭಿಣಿ ಪೋಕ್ಸೋ ಬಾಲ್ಯವಿವಾಹ ಹಾಗೂ ಮಕ್ಕಳ ಸಹಾಯವಾಣಿ-1098 ಮಕ್ಕಳಿಗೆ ಅರಿವು ಜಾಗೃತಿ ಮೂಡಿಸುವ ಕುರಿತು ವಿವಿಧ ಇಲಾಖೆಗಳು ನಿಗಾವಹಿಸ ಬೇಕಾದ ಆದ್ಯತೆಯ ಅಂಶಗಳ ಕುರಿತು 07 ಇಲಾಖೆಗಳಿಂದ ದಿನಾಂಕ:13.10.2025 ರಂದು ಜಂಟಿ ಸುತ್ತೋಲೆಯನ್ನು ಹೊರಡಿಸಲಾಗಿದೆ. |
| ಈ) | ಬಾಲ ಗರ್ಭಿಣಿಯರ ಪ್ರಮಾಣ ಹೆಚ್ಚಳದಲ್ಲಿ ಬಾಲ್ಯ ವಿವಾಹದ ಪಾಲೆಷ್ಟು; ಬಾಲ ಗರ್ಭಿಣಿಯರ ಪ್ರಮಾಣ | ಏಪ್ರಿಲ್-2025 ರಿಂದ ಅಕ್ಟೋಬರ್-2025ರ ವರೆಗೆ ಬಾಲ್ಯವಿವಾಹದಿಂದಾಗಿ ಬಾಲಗರ್ಭಿಣಿ ಪ್ರಕರಣಗಳ ಸಂಖ್ಯೆ:167<br>• ಬಾಲ್ಯವಿವಾಹದ ಪ್ರಯತ್ನ, ನಿಶ್ಚಿತಾರ್ಥದ ಬಗ್ಗೆ ಕ್ರಮ ಕೈಗೊಳ್ಳಲು ಬಾಲ್ಯವಿವಾಹ ನಿಷೇಧ ಕಾಯ್ದೆ-2006 ರಲ್ಲಿ ಯಾವುದೇ ಕಲಂಗಳಲ್ಲಿ ಅವಕಾಶ ಇಲ್ಲದೇ ದೂರನ್ನು |

| | | |
|---|---|---|
| | ತಗ್ಗಿಸಲು ಶಾಲಾ-ಕಾಲೇಜು, ಸಮುದಾಯಗಳಲ್ಲಿ ಬಾಲಕಿಯರ ಸುರಕ್ಷತೆಗೆ ಆದ್ಯತೆ ನೀಡಲು ಹಾಗೂ ಬಾಲ ಗರ್ಭಿಣಿ ಪ್ರಮಾಣ ತಗ್ಗಿಸುವ ನಿಟ್ಟಿನಲ್ಲಿ ಜಾಗೃತಿ ಮೂಡಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ? | ದಾಖಲಿಸಲು ಸಾಧ್ಯವಾಗುತ್ತಿಲ್ಲವಾದ್ದರಿಂದ ಇದನ್ನು ಅಪರಾಧವನ್ನಾಗಿಸಲು ಬಾಲ್ಯವಿವಾಹ ನಿಷೇಧ (ಕರ್ನಾಟಕ ತಿದ್ದುಪಡಿ -2025) ಅನ್ನು ಜಾರಿಗೆ ತರಲು ಕ್ರಮವಹಿಸಲಾಗುತ್ತಿದೆ.<br><br>**<u>ಸದರಿ ಪ್ರಕರಣಗಳನ್ನು ನಿಯಂತ್ರಿಸಲು ಈ ಕೆಳಕಂಡಂತೆ ಕಾಯ್ದೆ ಮತ್ತು ನಿಯಮಗಳನ್ನು ರೂಪಿಸಲಾಗಿದೆ.</u>**<br>○ ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ-2015<br>○ ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ತಿದ್ದುಪಡಿ ಕಾಯ್ದೆ 2021, 2016ರ ಮಾದರಿ ನಿಯಮಗಳು.<br>○ ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ತಡೆ (ಪೋಕ್ಸೋ) ಕಾಯ್ದೆ-2012 ನಿಯಮಗಳು-2020.<br>○ ಬಾಲ್ಯವಿವಾಹ ನಿಷೇಧ ಕಾಯ್ದೆ-2006,<br>○ ಬಾಲ್ಯವಿವಾಹ ನಿಷೇಧ (ಕರ್ನಾಟಕ) ನಿಯಮಗಳು- 2014.<br>○ ಬಾಲ್ಯವಿವಾಹ ನಿಷೇಧ (ಕರ್ನಾಟಕ ತಿದ್ದುಪಡಿ) ಕಾಯ್ದೆ-2016<br>○ ಬಾಲ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ-1986<br>○ ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ (ತಡೆಗಟ್ಟುವಿಕೆ) ಕಾಯ್ದೆ-1956 |

ಮಮಇ 180 ಮಭಾಬ 2025

**(ಲಕ್ಷ್ಮೀ ಆರ್. ಹೆಬ್ಬಾಳ್ಕರ್)**
ಮಹಿಳಾ ಮತ್ತುಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಹಾಗೂ ಹಿರಿಯ ನಾಗರೀಕರ
ಸಬಲೀಕರಣ ಸಚಿವರು.

ಅನುಬಂಧ

| ರಾಜ್ಯದಲ್ಲಿ ಆರೋಗ್ಯ ಮತ್ತು ಕುಟುಂಬ ಇಲಾಖೆಯ RCH Portalನಲ್ಲಿ ದಾಖಲಾದ ಬಾಲಗರ್ಭಿಣಿ ಪ್ರಕರಣಗಳ ಮಾಹಿತಿ (18 ವರ್ಷದ ಒಳಗಿನ ಮಕ್ಕಳ ಸಂಖ್ಯೆ) | | |
|---|---|---|
| ಕ್ರ. ಸಂ. | ಜಿಲ್ಲೆಗಳು | 18 ವರ್ಷದ ಒಳಗಿನ ಮಕ್ಕಳ ಸಂಖ್ಯೆ |
| 1 | 2 | 3 |
| 1 | ಬಾಗಲಕೋಟೆ | 17 |
| 2 | ಬೆಂಗಳೂರು ಕೇಂದ್ರ | 98 |
| 3 | ಬೆಂಗಳೂರು ಉತ್ತರ | |
| 4 | ಬೆಂಗಳೂರು ದಕ್ಷಿಣ | |
| 5 | ಬೆಂಗಳೂರು ಪೂರ್ವ | |
| 6 | ಬೆಂಗಳೂರು ಪಶ್ಚಿಮ | |
| 7 | ಬೆಂಗಳೂರು (ಗ್ರಾ) | 56 |
| 8 | ಬೆಳಗಾವಿ | 119 |
| 9 | ಬಳ್ಳಾರಿ | 93 |
| 10 | ಬೀದರ್ | 62 |
| 11 | ಚಿಕ್ಕಬಳ್ಳಾಪುರ | 27 |
| 12 | ಚಿಕ್ಕಮಗಳೂರು | 37 |
| 13 | ವಿಜಯಪುರ | 17 |
| 14 | ಚಾಮರಾಜನಗರ | 14 |
| 15 | ಚಿತ್ರದುರ್ಗ | 78 |
| 16 | ದಾವಣಗೆರೆ | 33 |
| 17 | ಧಾರವಾಡ | 7 |
| 18 | ಗದಗ | 3 |
| 19 | ಕಲಬುರಗಿ | 92 |
| 20 | ಹಾಸನ | 81 |
| 21 | ಹಾವೇರಿ | 21 |
| 22 | ಉತ್ತರ ಕನ್ನಡ | 11 |
| 23 | ಕೊಡಗು | 23 |
| 24 | ಕೋಲಾರ | 28 |
| 25 | ಕೊಪ್ಪಳ | 76 |
| 26 | ಮಂಡ್ಯ | 33 |
| 27 | ದಕ್ಷಿಣ ಕನ್ನಡ | 16 |
| 28 | ಮೈಸೂರು | 84 |
| 29 | ರಾಯಚೂರು | 142 |
| 30 | ಬೆಂಗಳೂರು ದಕ್ಷಿಣ ಜಿಲ್ಲೆ | 21 |
| 31 | ಶಿವಮೊಗ್ಗ | 40 |
| 32 | ತುಮಕೂರು | 218 |
| 33 | ಉಡುಪಿ | 6 |
| 34 | ಯಾದಗಿರಿ | 279 |
| 35 | ವಿಜಯನಗರ | 332 |
| | ಒಟ್ಟು | **2164** |